# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 903 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಕೆ.ಎ.ತಿಪ್ಪೇಸ್ವಾಮಿ<br>(ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | : | 22-02-2024 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| **ಅ)** | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆ ಹಾಗೂ ರಾಜ್ಯ ವಲಯ ಯೋಜನೆಗಳ ಅಡಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳು ಯಾವುವು; ಪೂರ್ಣ ಮಾಹಿತಿ ನೀಡುವುದು; | ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಡಿ ಅನುಷ್ಠಾನಗೊಳಿಸುತ್ತಿರುವ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳ ಮಾಹಿತಿಯನ್ನು **ಅನುಬಂಧದಲ್ಲಿ** ಒದಗಿಸಿದೆ. |
| **ಆ)** | ಕಳೆದ 3 ವರ್ಷಗಳಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ರಾಜ್ಯ ಸರ್ಕಾರಕ್ಕೆ ದೊರೆತಿರುವ ಅನುದಾನವೆಷ್ಟು; ಈ ನೆರವಿನಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; | ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಪತ್ರ ದಿನಾಂಕ 14.06.2023 ರಲ್ಲಿ "ಪ್ರಸಾದ್" ಯೋಜನೆಯಡಿ ಮೈಸೂರಿನ ಶ್ರೀ ಚಾಮುಂಡೇಶ್ವರಿ ದೇವಸ್ಥಾನವನ್ನು ರೂ.45.70 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿ ಪಡಿಸಲು ಕೇಂದ್ರದಿಂದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಆದರೆ ಅನುದಾನ ಬಿಡುಗಡೆಯಾಗಿರುವುದಿಲ್ಲ.<br><br>ಪ್ರಸ್ತುತ ಕಾಮಗಾರಿ ಅನುಷ್ಠಾನಗೊಳಿಸಲು ಗುತ್ತಿಗೆದಾರರ ಆಯ್ಕೆ ಮಾಡಲು ಕೆ.ಟಿ.ಐ.ಎಲ್ ಸಂಸ್ಥೆಯಿಂದ ದಿನಾಂಕ:18.01.2024 ರಂದು ಟೆಂಡರ್ ಆಹ್ವಾನಿಸಲಾಗಿದೆ. |
| **ಇ)** | ಈ ಯೋಜನೆಗಳಿಗೆ ಅನುಷ್ಠಾನಕ್ಕೆ ಅಗತ್ಯವಿರುವ ಅನುಮತಿ ಮತ್ತು ಮಂಜೂರಾತಿಗಳನ್ನು ಕೇಂದ್ರ ಸರ್ಕಾರದಿಂದ ಪಡೆಯಲಾಗಿದೆಯೇ; ಹಾಗಿದ್ದಲ್ಲಿ, ಭೌತಿಕ ಮತ್ತು ಆರ್ಥಿಕ ಪ್ರಗತಿ ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು? | |

TOR 90 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು

## ಅನುಬಂಧ

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) ರವರ ಪ್ರಶ್ನೆ ಸಂಖ್ಯೆ: 833 (903) ರ ಉಪ ಪ್ರಶ್ನೆ (ಅ) ಗೆ ಅನುಬಂಧ**

- **ರಾಜ್ಯದಲ್ಲಿ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆ ಹಾಗೂ ರಾಜ್ಯ ವಲಯ ಯೋಜನೆಗಳ ಅಡಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳು**

| ಕ್ರ ಸಂ | ಯೋಜನೆಯ ಹೆಸರು | ಪ್ರವಾಸಿ ತಾಣ | ಯೋಜನೆ ಪ್ರಸ್ತುತ ಸ್ಥಿತಿ | ಯೋಜನೆಯ ಉದ್ದೇಶ | ಬಿಡುಗಡೆ ಯಾಗಿರುವ ಅನುದಾನ (ರೂ.ಕೋಟಿಗಳಲ್ಲಿ) |
|---|---|---|---|---|---|
| 01 | ಪ್ರಸಾದ್ ಯೋಜನೆ | ಶ್ರೀ ಚಾಮುಂಡೇಶ್ವರಿ ದೇವಸ್ಥಾನ, ಮೈಸೂರು. | ಕಾಮಗಾರಿ ಪ್ರಾರಂಭಿಸಲು ದಿನಾಂಕ : 18.01.2024 ರಂದು ಟೆಂಡರ್ ಆಹ್ವಾನಿಸಲಾಗಿದೆ.<br><br>ಯೋಜನೆಯ ಅಂದಾಜು ಮೊತ್ತ ರೂ.45.70 ಕೋಟಿಗಳು | • ಪ್ರಮುಖ ರಾಷ್ಟ್ರೀಯ/ ಜಾಗತಿಕ ಯಾತ್ರಾ ಸ್ಥಳಗಳ ಪುನರ್ಯೌವನಗೊಳಿಸುವಿಕೆ ಮತ್ತು ಆಧ್ಯಾತ್ಮಿಕ ವರ್ಧನೆಗೊಳಿಸುವುದು.<br>• ವಿಶ್ವ ದರ್ಜೆಯ ಪ್ರವಾಸೋದ್ಯಮ ಯೋಜನೆಗಳನ್ನು ಒದಗಿಸುವ ಮೂಲಕ ಯೋಜಿತ, ಆದ್ಯತೆಯ ಮತ್ತು ಸುಸ್ಥಿರ ರೀತಿಯಲ್ಲಿ ಪಾರಂಪರಿಕ ನಗರದ ಸಮಗ್ರ ಪ್ರವಾಸೋದ್ಯಮ ಅಭಿವೃದ್ಧಿಯಡಿಯಲ್ಲಿ ಗುರುತಿಸಲಾದ ಯಾತ್ರಾ ಸ್ಥಳಗಳು ಮತ್ತು ಪಾರಂಪರಿಕ ನಗರಗಳ ಪ್ರವಾಸೋದ್ಯಮ ಆಕರ್ಷಣೆಯನ್ನು ಹೆಚ್ಚಿಸುವುದು.<br>• ಯಾತ್ರಿಕರು ಮತ್ತು ಪ್ರವಾಸಿಗರ ಸುರಕ್ಷತೆ ಮತ್ತು ಭದ್ರತೆಗಾಗಿ ಕ್ರಮಗಳನ್ನು ಬಲಪಡಿಸುವುದು ಮತ್ತು ಪ್ರವಾಸೋದ್ಯಮ ಸೇವೆಗಳ ಗುಣಮಟ್ಟವನ್ನು ಸುಧಾರಿಸುವುದು. | -- |
| 02 | ಸ್ವದೇಶ್ ದರ್ಶನ್ 2.0 | 1. ಮೈಸೂರು<br>2. ಹಂಪಿ | **ಮೈಸೂರು** :<br>• Ecological Experience Zone ಮತ್ತು<br>• Tanga Ride Experience Zone ಅಭಿವೃದ್ಧಿಪಡಿಸುವುದು.<br>**ಹಂಪಿ** :<br>Travellers Nook ಅಭಿವೃದ್ಧಿಪಡಿಸುವುದು.<br><br>ಯೋಜನೆಯ ಮೊದಲ ಹಂತದ ಕರಡು ಯೋಜನಾ ವರದಿಗಳನ್ನು ನವೆಂಬರ್ 2023 ರ ಮಾಹೆಯಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ | • ಪ್ರಾದೇಶಿಕ ಆರ್ಥಿಕತೆಗಳಿಗೆ ಪ್ರವಾಸೋದ್ಯಮದ ಕೊಡುಗೆಯನ್ನು ಹೆಚ್ಚಿಸುವುದು.<br>• ಸ್ಥಳೀಯ ಸಮುದಾಯಗಳಿಗೆ ಉದ್ಯೋಗ ಮತ್ತು ಸ್ವಯಂ ಉದ್ಯೋಗವನ್ನು ಸೃಷ್ಟಿಸುವುದು.<br>• ಆತಿಥ್ಯ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಸ್ಥಳೀಯ ಯುವಕರಿಗೆ ತರಬೇತಿ ನೀಡುವುದು.<br>• ಪ್ರವಾಸೋದ್ಯಮ ಮತ್ತು ಆತಿಥ್ಯದಲ್ಲಿ ಖಾಸಗಿ ವಲಯಗಳ ಹೂಡಿಕೆಗೆ ಪ್ರೋತ್ಸಾಹಿಸುವುದು.<br>• ಪ್ರದೇಶದ ಸಾಂಸ್ಕೃತಿಕ ಮತ್ತು ನೈಸರ್ಗಿಕ ಸಂಪನ್ಮೂಲಗಳನ್ನು ರಕ್ಷಿಸುವುದು ಮತ್ತು ಹೆಚ್ಚಿಸುವುದು.<br>• ಸ್ಥಳೀಯವಾಗಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸುವುದು. | -- |

| ಕ್ರ ಸಂ | ಯೋಜನೆಯ ಹೆಸರು | ಪ್ರವಾಸಿ ತಾಣ | ಯೋಜನೆ ಪ್ರಸ್ತುತ ಸ್ಥಿತಿ | ಯೋಜನೆಯ ಉದ್ದೇಶ | ಬಿಡುಗಡೆ ಯಾಗಿರುವ ಅನುದಾನ (ರೂ.ಕೋಟಿಗಳಲ್ಲಿ) |
|---|---|---|---|---|---|
| 03 | ಪ್ರಸಾದ್ 2.0 ಯೋಜನೆ | 1. ಶ್ರೀ ರೇಣುಕಾ ಎಲ್ಲಮ್ಮ ದೇವಸ್ಥಾನ, ಸವದತ್ತಿ.<br>2. ಪಾಪನಾಶ ದೇವಸ್ಥಾನ ಬೀದರ್<br>3. | ಪ್ರಸ್ತುತ 2 ಯೋಜನೆಗಳಿಗೆ ಸಂಬಂಧಿಸಿದಂತೆ ವಿವರವಾದ ಯೋಜನಾ ವರದಿ ಸಲ್ಲಿಕೆಗೆ ಸಮಾಲೋಚನಾ (PDMC) ಆಯ್ಕೆ ಮಾಡಲು ದಿನಾಂಕ : 19.01.2024 ರಂದು ಟೆಂಡರ್ ಆಹ್ವಾನಿಸಲಾಗಿದೆ | • ಪ್ರಮುಖ ರಾಷ್ಟ್ರೀಯ/ ಜಾಗತಿಕ ಯಾತ್ರಾ ಸ್ಥಳಗಳ ಪುನರ್ಯೌವನಗೊಳಿಸುವಿಕೆ ಮತ್ತು ಆಧ್ಯಾತ್ಮಿಕ ವರ್ಧನೆಗೊಳಿಸುವುದು.<br>• ವಿಶ್ವ ದರ್ಜೆಯ ಪ್ರವಾಸೋದ್ಯಮ ಯೋಜನೆಗಳನ್ನು ಒದಗಿಸುವ ಮೂಲಕ ಯೋಜಿತ, ಆದ್ಯತೆಯ ಮತ್ತು ಸುಸ್ಥಿರ ರೀತಿಯಲ್ಲಿ ಪಾರಂಪರಿಕ ನಗರದ ಸಮಗ್ರ ಪ್ರವಾಸೋದ್ಯಮ ಅಭಿವೃದ್ಧಿಯಡಿಯಲ್ಲಿ ಗುರುತಿಸಲಾದ ಯಾತ್ರಾ ಸ್ಥಳಗಳು ಮತ್ತು ಪಾರಂಪರಿಕ ನಗರಗಳ ಪ್ರವಾಸೋದ್ಯಮ ಆಕರ್ಷಣೆಯನ್ನು ಹೆಚ್ಚಿಸುವುದು.<br>• ಯಾತ್ರಿಕರು ಮತ್ತು ಪ್ರವಾಸಿಗರ ಸುರಕ್ಷತೆ ಮತ್ತು ಭದ್ರತೆಗಾಗಿ ಕ್ರಮಗಳನ್ನು ಬಲಪಡಿಸುವುದು ಮತ್ತು ಪ್ರವಾಸೋದ್ಯಮ ಸೇವೆಗಳ ಗುಣಮಟ್ಟವನ್ನು ಸುಧಾರಿಸುವುದು. | -- |
| 04 | Challenge Based Destination Development Scheme (a sub-scheme under Swadesh Darshan 2.0) | 1. ಲಕ್ಕುಂಡಿ, ಗದಗ ಜಿಲ್ಲೆ<br>2. ಕಲಬುರಗಿ, ಕಲಬುರಗಿ ಜಿಲ್ಲೆ<br>3. ಉಡುಪಿ, ಉಡುಪಿ ಜಿಲ್ಲೆ<br>4. ಬೀದರ್, ಬೀದರ್ ಜಿಲ್ಲೆ<br>5. ವಿರಾಜಪೇಟೆ, ಕೊಡಗು ಜಿಲ್ಲೆ | ಪ್ರಸ್ತಾವನೆಗಳನ್ನು ಕೇಂದ್ರಕ್ಕೆ ದಿನಾಂಕ : 23.01.2024 ರಂದು ಸಲ್ಲಿಸಲಾಗಿದೆ | • ಲಕ್ಕುಂಡಿ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳಲ್ಲಿ ಸಾಂಸ್ಕೃತಿಕ ಮತ್ತು ಐತಿಹಾಸಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವುದು.<br>• ಉಡುಪಿ ಮತ್ತು ಕೊಡಗು ಜಿಲ್ಲೆಗಳಲ್ಲಿ ಪರಿಸರ ಪ್ರವಾಸೋದ್ಯಮವನ್ನು ಉತ್ತೇಜಿಸುವುದು. | -- |